ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 23/6/2020

# ಏಳು ಮಂದಿ ಮೇಲ್ಮನೆ ಪ್ರವೇಶ

**ಬೆಂಗಳೂರು:** ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದ ಬಿಜೆಪಿಯ ನಾಲ್ವರು, ಕಾಂಗ್ರೆಸ್‌ನ ಇಬ್ಬರು ಹಾಗೂ ಜೆಡಿಎಸ್‌ನ ಒಬ್ಬರು ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ನಾಮಪತ್ರ ವಾಪಸ್ ಪಡೆಯಲು ಸೋಮವಾರ ಕೊನೆಯ ದಿನವಾಗಿತ್ತು. ಬಿಜೆಪಿಯ ಎಂ.ಟಿ.ಬಿ.ನಾಗರಾಜ್, ಪ್ರತಾಪ್ ಸಿಂಹ ನಾಯಕ್, ಆರ್. ಶಂಕರ್, ಸುನೀಲ್ ವಲ್ಯಾಪುರೆ, ಕಾಂಗ್ರೆಸ್‌ನ ಬಿ.ಕೆ. ಹರಿಪ್ರಸಾದ್, ನಜೀರ್ ಅಹ್ಮದ್, ಜೆಡಿಎಸ್‌ನ ಗೋವಿಂದರಾಜು ಅವರ ಹೆಸರುಗಳು ಮಾತ್ರ ಅಂತಿಮ ಕಣದಲ್ಲಿದ್ದವು. ಈ ಹಿನ್ನೆಲೆಯಲ್ಲಿ ಎಲ್ಲಾ ಏಳು ಮಂದಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ವಿಧಾನಸಭೆ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ಅಧಿಕೃತವಾಗಿ ಘೋಷಿಸಿದ್ದಾರೆ. ಬಿ.ಕೆ.ಹರಿಪ್ರಸಾದ್ ಸೇರಿದಂತೆ ಆಯ್ಕೆಯಾದವರು ಪ್ರಮಾಣ ಪತ್ರ ಸ್ವೀಕರಿಸಿದ್ದಾರೆ.

## ಎಂ.ಟಿ.ಬಿ.ನಾಗರಾಜ್



ಅಪ್ಪಟ ಕಾಂಗ್ರೆಸಿಗ, ಆದರೆ ಜೆಡಿಎಸ್-ಕಾಂಗ್ರೆಸ್ ಮೈತ್ರಿ ಸರಕಾರದ ವಿರುದ್ಧ ಸಿಡಿದದ್ದು ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ಸಲ್ಲಿಸಿ ಬಿಜೆಪಿ ಸೇರಿದ್ದ ಎಂ.ಟಿ.ಬಿ.ನಾಗರಾಜ್ ಮೊದಲ ಬಾರಿಗೆ ವಿಧಾನ ಪರಿಷತ್ ಪ್ರವೇಶ. ಕಳೆದ ಡಿಸೆಂಬರ್‌ನಲ್ಲಿ ನಡೆದ ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸಿ ಸೋತಿದ್ದ ಹಿನ್ನೆಲೆಯಲ್ಲಿ ಪಕ್ಷದಿಂದ ಮೇಲ್ಮನೆಗೆ ಅವಕಾಶ. ಹೊಸಕೋಟೆ ಕ್ಷೇತ್ರದಿಂದ ಮೂರು ಬಾರಿ ಶಾಸಕರಾಗಿ ಆಯ್ಕೆಗೊಂಡಿದ್ದಾರೆ. ಮೈತ್ರಿ ಸರಕಾರದಲ್ಲಿ ವಸತಿ ಸಚಿವರಾಗಿ ಕೆಲಸ ಮಾಡಿದ್ದರು.

## [illegible]



ಹಾವೇರಿ ಜಿಲ್ಲೆಯ ರಾಣೆಬೆನ್ನೂರು ಕ್ಷೇತ್ರದಿಂದ ಮೊದಲ ಬಾರಿಗೆ ವಿಧಾನಸಭೆಗೆ ಪಕ್ಷೇತರ ಶಾಸಕರಾಗಿ ಆಯ್ಕೆ. ಹಿಂದಿನ ಮೈತ್ರಿ ಸರಕಾರದಲ್ಲಿ ಅರಣ್ಯ ಸಚಿವರಾಗಿ ಸೇವೆ. ಆಪರೇಷನ್ ಕಮಲದ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ; ನಂತರದ ದಿನಗಳಲ್ಲಿ ಬಿಜೆಪಿ ಸೇರ್ಪಡೆ. ಆದರೆ ಉಪ ಚುನಾವಣೆಯಲ್ಲಿ ಸ್ಪರ್ಧಿಸಲು ಟಿಕೆಟ್ ನಿರಾಕರಿಸಿದ ಹಿನ್ನೆಲೆಯಲ್ಲಿ ಮೇಲ್ಮನೆಗೆ ಅವಕಾಶ. ಈಗ ಮೊದಲ ಬಾರಿಗೆ ಪರಿಷತ್‌ಗೆ ಆಯ್ಕೆ. ಈ ಹಿಂದೆ ಶಂಕರ್ ಬೆಂಗಳೂರು ಉಪ ಮೇಯರ್ ಆಗಿ ಕೆಲಸ ಮಾಡಿದ್ದರು.

## ಸುನೀಲ್ ವಲ್ಯಾಪುರೆ



ಕಲಬುರಗಿ ಜಿಲ್ಲೆಯ ಶಹಾಬಾದ್ ಹಾಗೂ ಚಿಂಚೋಳಿ ಕ್ಷೇತ್ರದಿಂದ ಎರಡು ಬಾರಿ (2004, 2008) ಬಿಜೆಪಿ ಶಾಸಕರಾಗಿ ಆಯ್ಕೆ. 2013, 2018ರ ಚುನಾವಣೆಯಲ್ಲಿ ಸೋಲು. ಜಗದೀಶ್ ಶೆಟ್ಟರ್ ಸಿಎಂ ಆಗಿದ್ದ ಬಿಜೆಪಿ ಸರಕಾರದಲ್ಲಿ ಅಲ್ಪ ಅವಧಿಗೆ ಮೂಲಭೂತ ಸೌಲಭ್ಯ ಸಚಿವರಾಗಿದ್ದು ನಂತರ ರಾಜೀನಾಮೆ ನೀಡಿ ಯಡಿಯೂರಪ್ಪ ನೇತೃತ್ವದ ಕೆಜೆಪಿಗೆ ಸೇರ್ಪಡೆ. ಆಪರೇಷನ್ ಕಮಲದ ಹಿನ್ನೆಲೆಯಲ್ಲಿ ಚಿಂಚೋಳಿ ಶಾಸಕ ಡಾ.ಉಮೇಶ್ ಜಾಧವ್ ಬಿಜೆಪಿ ಸೇರಿ ಲೋಕಸಭಾ ಸದಸ್ಯರಾದರು. ಆದರೆ, ಚಿಂಚೋಳಿ ಉಪ ಚುನಾವಣೆಯಲ್ಲಿ ಸುನೀಲ್ ವಲ್ಯಾಪುರೆಗೆ ಟಿಕೆಟ್ ನಿರಾಕರಣೆ. ಹೀಗಾಗಿ ಈಗ ಮೊದಲ ಬಾರಿಗೆ ಪರಿಷತ್ ಪ್ರವೇಶ.

## ನಜೀರ್ ಅಹ್ಮದ್



ಈಗ ಮೇಲ್ಮನೆಗೆ ಆಯ್ಕೆಯಾಗಿರುವ ಸದಸ್ಯರ ಪೈಕಿ ಅತ್ಯಂತ ಸುದೀರ್ಘ ರಾಜಕೀಯ ಅನುಭವವುಳ್ಳ ಹಿರಿತಲೆ. 1989ರಲ್ಲಿ ಬಿನ್ನಿಪೇಟೆಯಿಂದ ಶಾಸಕರಾಗಿ ಆಯ್ಕೆಯಾಗಿದ್ದರು. ದಿವಂಗತ ಎಸ್. ಬಂಗಾರಪ್ಪ ಸಂಪುಟದಲ್ಲಿ ಸಚಿವರಾಗಿ ಸೇವೆ. ಕೋಲಾರ ಸ್ಥಳೀಯ ಸಂಸ್ಥೆಗಳ ಚುನಾವಣೆ ಮೂಲಕ 2 ಸಲ ಪರಿಷತ್‌ಗೆ ಆಯ್ಕೆ, ವಿಧಾನಸಭೆಯಿಂದ ವಿಧಾನ ಪರಿಷತ್ತಿನ ಚುನಾವಣೆಯಲ್ಲಿ 2ನೇ ಬಾರಿಗೆ ಪರಿಷತ್‌ಗೆ ಆಯ್ಕೆ.

## ಬಿ.ಕೆ.ಹರಿಪ್ರಸಾದ್



ಕಾಂಗ್ರೆಸ್‌ನಿಂದ ಮೂರು ಬಾರಿ ರಾಜ್ಯಸಭಾ ಸದಸ್ಯ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದಿಂದ ಎರಡು ಬಾರಿ ಸ್ಪರ್ಧಿಸಿ ಸೋಲು. ಎಐಸಿಸಿಯಲ್ಲಿ ಸುದೀರ್ಘ ಸೇವೆ. ಇದೇ ಮೊದಲ ಬಾರಿಗೆ ವಿಧಾನ ಪರಿಷತ್‌ಗೆ ಆಯ್ಕೆ.



## [illegible]

ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ಅಧ್ಯಕ್ಷರಾಗಿ ಕೆಲಸ ಮಾಡಿದ್ದ ನಾಯಕ್ ಇದೇ ಮೊದಲ ಬಾರಿಗೆ ವಿಧಾನ ಪರಿಷತ್ ಪ್ರವೇಶ.

## ಇಂಚರ ಗೋವಿಂದರಾಜ್



ಕೋಲಾರದ ಉದ್ಯಮಿ ಜೆಡಿಎಸ್‌ನ ಕಾರ್ಯಕರ್ತ. ಘಟಾನುಘಟಿಗಳ ಲಾಬಿ ಹಿಂದಿಕ್ಕಿ ಮೊದಲ ಬಾರಿಗೆ ಜಾತ್ಯತೀತ ಜನತಾ ದಳದಿಂದ ವಿಧಾನ ಪರಿಷತ್ ಪ್ರವೇಶಿಸಿರುವ ಗೋವಿಂದರಾಜ್ ಮೂಲತಃ ಉದ್ಯಮಿ. ಜಿಲ್ಲೆಯಲ್ಲಿ ಪಕ್ಷ ಸಂಘಟನೆಗೆ ಇವರ ಕೊಡುಗೆ ಸಾಕಷ್ಟಿದೆ.